**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2377

ಸದಸ್ಯರ ಹೆಸರು : ಶ್ರೀ ಕೆ ಹರೀಶ್ ಕುಮಾರ್

ಉತ್ತರಿಸುವ ದಿನಾಂಕ : 22/03/2022

ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ 58 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದು ಎರಡು ತಿಂಗಳು ಕಳೆದರೂ ಸರ್ಕಾರ ಈವರೆಗೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಮೀಸಲಾತಿಯನ್ನು ಅಂತಿಮಗೊಳಿಸಿ ಅಧಿಸೂಚನೆ ಹೊರಡಿಸದಿರಲು ಕಾರಣಗಳೇನು; | ನಗರಾಭಿವೃದ್ಧಿ ಇಲಾಖೆಯು ಹಲವು ನಗರ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಿದ್ದು, ಅವುಗಳನ್ನು ಒಳಗೊಂಡಂತೆ ರಾಜ್ಯವನ್ನು ಒಂದು ಘಟಕವನ್ನಾಗಿಟ್ಟುಕೊಂಡು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ 11 ರನ್ವಯ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸಲು ನಿಯಮವನ್ನು ರಚಿಸಲು ಕ್ರಮವಹಿಸಲಾಗುತ್ತಿದೆ.<br><br>ಏತನ್ಮಧ್ಯೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ State of Maharashtra v/s Union of India ರವರು ಸಲ್ಲಿಸಿರುವ ರಿಟ್ ಪಿಟಿಷನ್ (ಸಿವಿಲ್) ಸಂಖ್ಯೆ: 841/2021 c/w ಎಸ್.ಎಲ್.ಪಿ. ಸಂಖ್ಯೆ: 19756/2021 ರಲ್ಲಿ ದಿನಾಂಕ: 15-12-2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಶನ್ ಸಂಖ್ಯೆ: 31495/2021 ಗೆ ಸಂಬಂಧಿಸಿದಂತೆ ದಿನಾಂಕ: 17-12-2021 ರ ಆದೇಶದಲ್ಲಿ ಡಾ॥ ಕೆ.ಕೃಷ್ಣಮೂರ್ತಿ ಮತ್ತು ಇತರರು ಸಲ್ಲಿಸಿದ್ದ ರಿಟ್ ಅರ್ಜಿ (ಸಿವಿಲ್) ಸಂಖ್ಯೆ: 256/1994 ರಲ್ಲಿ ದಿನಾಂಕ: 11-05-2010 ರಂದು ನೀಡಿರುವ ಆದೇಶವನ್ನು ಪುನರ್ ಪರಿಶೀಲಿಸಿ ಪ್ರಸ್ತುತ ನಿಗದಿಪಡಿಸುತ್ತಿರುವ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಮುಂದಿನ ಆದೇಶದವರೆಗೆ ನಿಗದಿಪಡಿಸದೇ ಸಂವಿಧಾನದ ಪ್ರಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ ನಿಗದಿಪಡಿಸಿ, ಉಳಿದ ಹುದ್ದೆಗಳನ್ನು ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಬೇಕಾಗಿರುತ್ತದೆ ಎಂದು ಉಲ್ಲೇಖಿಸಲಾಗಿದೆ. |

| | | |
|---|---|---|
| | | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಮೇಲ್ಕಂಡ ಆದೇಶದ ಸಾಧಕ ಬಾಧಕಗಳ ಬಗ್ಗೆ ಚರ್ಚಿಸಿ ಸರ್ಕಾರದಿಂದ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು. |
| (ಆ) | ಅಧ್ಯಕ್ಷರು ಮತ್ತು ಉಪಾಧ್ಯಕ್ಷರನ್ನು ಆಯ್ಕೆ ಮಾಡದ ಕಾರಣ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿ ಕುಂಠಿತಗೊಂಡಿರುವುದನ್ನು ಸರ್ಕಾರ ಮನಗಂಡಿದೆಯೇ; | ಪ್ರಸ್ತುತ ಚುನಾಯಿತ ಪ್ರತಿನಿಧಿಗಳ ಸಮಿತಿಗಳು ಅಸ್ತಿತ್ವಕ್ಕೆ ಬಾರದೇ ಇರುವ ಸ್ಥಳೀಯ ಸಂಸ್ಥೆಗಳಿಗೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ 315 ರನ್ವಯ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆ ಉಂಟಾಗಿರುವುದಿಲ್ಲ. |
| (ಇ) | ಕೆಲವೇ ಕೆಲವು ಸ್ಥಳೀಯ ಸಂಸ್ಥೆಗಳ ಫಲಿತಾಂಶವನ್ನು ಪ್ರಶ್ನಿಸಿ ನ್ಯಾಯಾಲಯದಲ್ಲಿ ಇದೆ ಎಂದು ವಿಳಂಬ ದೋರಣೆ ಅನುಸರಿಸುತ್ತಿರುವುದು ಸೂಕ್ತವೇ ? | ಉಪ ಪ್ರಶ್ನೆ (ಅ) ರಲ್ಲಿ ಒದಗಿಸಿದೆ. |

ಸಂಖ್ಯೆ: ನಅಇ 33 ಎಲ್‌ಸಿಕ್ಯೂ 2022

21.2.2022

(ಎನ್. ನಾಗರಾಜು ಎಂ.ಟಿ.ಬಿ)
ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು.